ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು
ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತ, ಬೆಂಗಳೂರು ಡೇರಿ ಪ್ರಾಂಗಣ,
ಡಾ॥ ಎಂ.ಹೆಚ್.ಮರೀಗೌಡ ರಸ್ತೆ, ಡಿ.ಆರ್. ಕಾಲೇಜ್ ಅಂಚೆ, ಬೆಂಗಳೂರು - 560029.
ದೂರವಾಣಿ ಸಂಖ್ಯೆ:080-26096207 website: www.bamulnandini.coop

ಸಂಖ್ಯೆ: ಬಮೂಲ್/ಆಡಳಿತ/ನೇರ ನೇಮಕಾತಿ/70 /2017-18 ದಿನಾಂಕ: 07-07-2017

## ನೇಮಕಾತಿ ಪ್ರಕಟಣೆ

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಬೆಂಗಳೂರು ಇದರಲ್ಲಿ ಖಾಲಿ ಇರುವ ವಿವಿಧ ವೃಂದಗಳಲ್ಲಿನ 250 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು **ಆನ್‌ಲೈನ್** ಮುಖಾಂತರ ಆಹ್ವಾನಿಸಲಾಗಿದೆ. ಖುದ್ದಾಗಿ/ಅಂಚೆ/ಕೊರಿಯರ್ ಮೂಲಕ ಅರ್ಜಿ ಸಲ್ಲಿಸಲು **ಅವಕಾಶವಿಲ್ಲವೆಂದು** ಈ ಮೂಲಕ ಸ್ಪಷ್ಟಪಡಿಸಿದೆ. ಸಹಕಾರ ಸಂಘಗಳ ನಿಬಂಧಕರ ಕಛೇರಿ ಆದೇಶ ಸಂಖ್ಯೆ: ಅನಿ/ಡಿಎವೈ-4/ನೇಮಕಾತಿ/145/2016-17 ದಿನಾಂಕ: 29-05-2017 ಮತ್ತು ಆದೇಶ ಸಂಖ್ಯೆ: ಅನಿ/ಡಿಎವೈ-4/ನೇ.ನೇ/36/2017-18 ದಿನಾಂಕ: 26-06-2017 ರನ್ವಯ ಅನುಮೋದಿಸಿದಂತೆ ನೇರ ನೇಮಕಾತಿಗೆ ಪರಿಗಣಿಸಲಾಗಿರುವ ಹುದ್ದೆಗಳ ವಿವರ.

### 1. ಸಹಾಯಕ ವ್ಯವಸ್ಥಾಪಕರು(ಪ.ವೈ/ಕೃ.ಗ) ವೇತನ ಶ್ರೇಣಿ 28100-50100 - 22 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1<br>ಗ್ರಾ-1<br>ಅಂ.ವಿ-1 | | ಇ-1<br>ಮ-1 | ಇ-1<br>ಮ-2<br>ಗ್ರಾ-1<br>ಅಂ.ವಿ-1 | ಇ-1 | ಇ-1 | ಇ-1 | ಇ-1<br>ಮ-3<br>ಮಾ.ಸೈ-1<br>ಗ್ರಾ-3<br>ಕ.ಮಾ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಬಿ.ವಿ.ಎಸ್‌ಸಿ/ಬಿ.ವಿ.ಎಸ್‌ಸಿ & ಎ.ಹೆಚ್ ಪದವಿಯನ್ನು ಪಡೆದಿರಬೇಕು ಹಾಗೂ ಹಾಲು ಒಕ್ಕೂಟಗಳಲ್ಲಿ ಕನಿಷ್ಠ 02 ವರ್ಷ ಸೇವೆ ಸಲ್ಲಿಸಿರುವ ಬಗ್ಗೆ ಸೇವಾನುಭವದ ದೃಢೀಕರಣವನ್ನು ಕ್ರಮಮಾರ್ಗದಲ್ಲಿ ಶೇ&ತಾಂ ವಿಭಾಗದ ಮುಖ್ಯಸ್ಥರಿಂದ ಪಡೆದು ಸಲ್ಲಿಸಬೇಕು ಮತ್ತು ಒಕ್ಕೂಟದಲ್ಲಿ ಕನಿಷ್ಠ 03 ವರ್ಷಗಳ ಸೇವೆ ಸಲ್ಲಿಸಲು ಬದ್ಧರಾಗಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

### 2. ವೈದ್ಯಾಧಿಕಾರಿ ವೇತನ ಶ್ರೇಣಿ 28100-50100 - 01 ಹುದ್ದೆ:-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಇ-1 |

ಕನಿಷ್ಠ ವಿದ್ಯಾರ್ಹತೆ:-

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಎಂ.ಬಿ.ಬಿ.ಎಸ್ ಪದವಿಯನ್ನು ಪಡೆದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**3. ತಾಂತ್ರಿಕ ಅಧಿಕಾರಿ(ಡಿ.ಟಿ) ವೇತನ ಶ್ರೇಣಿ: 22800-43200 - 15 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1 | | ಇ-1 | ಇ-1<br>ಮ-1<br>ಗ್ರಾ-1<br>ಕ.ಮಾ-1 | ಅಂ.ವಿ-1 | ಅಂ.ವಿ-1 | ಮ-1<br>ಗ್ರಾ-1<br>ಅಂ.ವಿ-1 | ಮ-1<br>ಮಾ.ಸೈ-1<br>ಗ್ರಾ-2 |

ಕನಿಷ್ಠ ವಿದ್ಯಾರ್ಹತೆ:-

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಬಿ.ಎಸ್.ಸಿ (ಡೇರಿ ಟೆಕ್ನಾಲಜಿ)/ ಬಿ.ಟೆಕ್ (ಡೇರಿ ಟೆಕ್ನಾಲಜಿ) ಪದವಿಯನ್ನು ಪಡೆದಿರಬೇಕು. ಜೊತೆಗೆ computerized office packages ನಿರ್ವಹಿಸುವ ಬಗ್ಗೆ ಅಗತ್ಯ ಜ್ಞಾನ ಹೊಂದಿರಬೇಕು.

**4. (ಎ) ತಾಂತ್ರಿಕ ಅಧಿಕಾರಿ(ಅಭಿಯಂತರ)- ಸಿವಿಲ್ ವೇತನ ಶ್ರೇಣಿ: 22800-43200 - 01 ಹುದ್ದೆಗಳು:-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಇ-1 |

ಕನಿಷ್ಠ ವಿದ್ಯಾರ್ಹತೆ:-

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಇಂಜಿನಿಯರಿಂಗ್ ಇನ್ ಸಿವಿಲ್ ಪದವಿಯನ್ನು ಪಡೆದಿರಬೇಕು. ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆಗಳಲ್ಲಿ/ಡೇರಿ ಆರ್ಗನೈಜೇಷನ್‌ಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**4 (ಬಿ) ತಾಂತ್ರಿಕ ಅಧಿಕಾರಿ(ಅಭಿಯಂತರ)- ಮೆಕ್ಯಾನಿಕಲ್/ ಇನ್ಸ್‌ಟ್ರುಮೆಂಟೇಷನ್/ ಇಂಡಸ್ಟ್ರಿಯಲ್ ಇಂಜಿನಿಯರಿಂಗ್ ವೇತನ ಶ್ರೇಣಿ: 22800-43200 - 05 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಕ.ಮಾ-1 | | | ಮಾ.ಸೈ-1 | | | | ಇ-1<br>ಮ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಇಂಜಿನಿಯರಿಂಗ್ ಇನ್ ಮೆಕ್ಯಾನಿಕಲ್/ ಇನ್ಸ್ಟ್ರುಮೆಂಟೇಷನ್/ ಇಂಡಸ್ಟ್ರಿಯಲ್ ಮ್ಯಾನೇಜ್‌ಮೆಂಟ್ ಪದವಿಯನ್ನು ಪಡೆದಿರಬೇಕು. ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆಗಳಲ್ಲಿ/ಡೇರಿ ಆರ್ಗನೈಜೇಷನ್ ಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**4.** (ಸಿ) **ತಾಂತ್ರಿಕ ಅಧಿಕಾರಿ(ಅಭಿಯಂತರ)- ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್/ಕಂಪ್ಯೂಟರ್ ಸೈನ್ಸ್ ವೇತನ ಶ್ರೇಣಿ: 22800-43200 - 02 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಇ-1<br>ಮಾ.ಸೈ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಇಂಜಿನಿಯರಿಂಗ್ ಇನ್ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್/ಕಂಪ್ಯೂಟರ್ ಸೈನ್ಸ್ ಪದವಿಯನ್ನು ಪಡೆದಿರಬೇಕು. ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆಗಳಲ್ಲಿ/ ಡೇರಿ ಆರ್ಗನೈಜೇಷನ್ ಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**4** (ಡಿ) **ತಾಂತ್ರಿಕ ಅಧಿಕಾರಿ(ಅಭಿಯಂತರ)- ಎಲೆಕ್ಟ್ರಿಕಲ್ ವೇತನ ಶ್ರೇಣಿ: 22800-43200 - 01 ಹುದ್ದೆ:-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಮ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಪದವಿಯನ್ನು ಪಡೆದಿರಬೇಕು. ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆಗಳಲ್ಲಿ/ಡೇರಿ ಆರ್ಗನೈಜೇಷನ್ ಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**4** (ಇ) **ತಾಂತ್ರಿಕ ಅಧಿಕಾರಿ(ಅಭಿಯಂತರ)- ಎನ್ವಿರಾನ್‌ಮೆಂಟ್ ಇಂಜಿನಿಯರಿಂಗ್ ವೇತನ ಶ್ರೇಣಿ: 22800-43200 - 01 ಹುದ್ದೆ :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | ಇ-1 | | | | | |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಎನ್ವಿರಾನ್‌ಮೆಂಟ್ ಇಂಜಿನಿಯರಿಂಗ್ ಪದವಿಯನ್ನು ಪಡೆದಿರಬೇಕು. ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆಗಳಲ್ಲಿ/ಡೇರಿ ಆರ್ಗನೈಜೇಷನ್‌ಗಳಲ್ಲಿ ಕನಿಷ್ಠ ೦2 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

## 5. <u>ಕೃಷಿ ಅಧಿಕಾರಿ ವೇತನ ಶ್ರೇಣಿ: 22800-43200 - 03 ಹುದ್ದೆಗಳು :-</u>

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | ಇ-1 | | | | | | ಮ-1<br>ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.5೦ ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.6೦ ಅಂಕಗಳೊಂದಿಗೆ ಬಿ.ಎಸ್‌ಸಿ(ಕೃಷಿ) ಪದವಿಯನ್ನು ಪಡೆದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

## 6. <u>ಮಾರುಕಟ್ಟೆ ಅಧಿಕಾರಿ ವೇತನ ಶ್ರೇಣಿ: 22800-43200 - 05 ಹುದ್ದೆಗಳು :-</u>

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1 | | | ಮ-1<br>ಗ್ರಾ-1 | | | | ಮ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.5೦ ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.6೦ ಅಂಕಗಳೊಂದಿಗೆ ಬಿ.ಬಿ.ಎ/ ಬಿ.ಬಿ.ಎಂ/ಬಿ.ಕಾಂ/ಬಿ.ಎಸ್‌ಸಿ(ಅಗ್ರಿ ಮಾರ್ಕೆಟಿಂಗ್ ಅಂಡ್ ಕೋ-ಆಪರೇಷನ್) ಪದವಿ ಜೊತೆಗೆ ಎಂ.ಬಿ.ಎ ಇನ್ ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ ನಿಯತ ಸ್ನಾತಕೋತ್ತರ ಪದವಿಯನ್ನು ಪಡೆದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

## 7. (ಎ) <u>ವಿಸ್ತರಣಾಧಿಕಾರಿ ದರ್ಜೆ-3 ವೇತನ ಶ್ರೇಣಿ: 17650-32000- ಒಳಸೇವಾ ಅಭ್ಯರ್ಥಿಗಳಿಗೆ 14 ಹುದ್ದೆಗಳು</u>

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1<br>ಗ್ರಾ-1 | ಗ್ರಾ-1 | ಇ-1 | ಮ-2<br>ಗ್ರಾ-2<br>ಕ.ಮಾ-1 | ಅಂ.ವಿ-1 | ಇ-1 | ಮ-1 | ಇ-1<br>ಮ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ.,/ಬಿ.ಎಸ್‌ಸಿ., ಪದವಿ ಜೊತೆಗೆ Basic Knowledge of Computer Operation ಜ್ಞಾನ ಹೊಂದಿರಬೇಕು. ಬೆಂಗಳೂರು ಸಹಕಾರ ಹಾಲು ಒಕ್ಕೂಟದಲ್ಲಿ ಖಾಯಂ ನೌಕರರಾಗಿ ಕನಿಷ್ಠ 5 ವರ್ಷ ಸೇವಾನುಭವ ಹೊಂದಿದ್ದು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಕ್ಕೆ ಕನಿಷ್ಠ 5 ವರ್ಷ ನಿರಂತರ ಸೇವೆ ಸಲ್ಲಿಸುತ್ತಿರಬೇಕು. ಒಕ್ಕೂಟದ ಪ್ರಧಾನ ವ್ಯವಸ್ಥಾಪಕರು (ಆಡಳಿತ) ರವರಿಂದ ಕ್ರಮಮಾರ್ಗದಲ್ಲಿ ಪಡೆದ **ಸೇವಾ ದೃಢೀಕರಣ ಪತ್ರವನ್ನು** ಹಾಗೂ ವ್ಯ.ನಿ ರವರಿಂದ ಪಡೆದ ನಿರಾಪೇಕ್ಷಣಾ ಪತ್ರ ಲಗತ್ತಿಸಬೇಕು.

7 (ಬಿ) **ವಿಸ್ತರಣಾಧಿಕಾರಿ ದರ್ಜೆ-3 ವೇತನ ಶ್ರೇಣಿ: 17650-32000- ಬೆಂಗಳೂರು ಹಾಲು ಒಕ್ಕೂಟದ ವ್ಯಾಪ್ತಿಯ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗಳಿಗೆ 13 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1<br>ಅಂ.ವಿ-1 | ಮ-1 | | ಮ-1<br>ಮಾ.ಸೈ-1<br>ಅಂ.ವಿ-1 | ಇ-1 | ಗ್ರಾ-1 | ಅಂ.ವಿ-1 | ಇ-1<br>ಮ-2<br>ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ.,/ಬಿ.ಎಸ್‌ಸಿ., ಪದವಿ ಜೊತೆಗೆ Basic Knowledge of Computer Operation ಜ್ಞಾನ ಹೊಂದಿರಬೇಕು. ನಿರಂತರ ಕನಿಷ್ಠ 5 ವರ್ಷಗಳಿಂದ ಬೆಂಗಳೂರು ಸಹಕಾರ ಹಾಲು ಒಕ್ಕೂಟದ ವ್ಯಾಪ್ತಿಗೆ ಒಳಪಡುವ ಹಾಲು ಉತ್ಪಾದಕರ ಸಹಕಾರ ಸಂಘಗಳಲ್ಲಿ ಕಾರ್ಯನಿರ್ವಹಿಸುತ್ತಿರಬೇಕು. ಸಂಬಂಧಪಟ್ಟ ಶಿಬಿರ ಕಚೇರಿಯ ಉಪ ವ್ಯವಸ್ಥಾಪಕರವರ ಶಿಫಾರಸ್ಸಿನೊಂದಿಗೆ ಪ್ರಧಾನ ವ್ಯವಸ್ಥಾಪಕರು(ಶೇ. ಮತ್ತು ತಾಂ.) ರವರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಹಾಗೂ ಸಂಬಂಧಿಸಿದ ಸಂಘದಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಅರ್ಜಿಯೊಂದಿಗೆ ಕಡ್ಡಾಯವಾಗಿ ಲಗತ್ತಿಸಿರಬೇಕು.

7 (ಸಿ) **ವಿಸ್ತರಣಾಧಿಕಾರಿ ದರ್ಜೆ-3 ವೇತನ ಶ್ರೇಣಿ: 17650-32000- ಇತರೆ ಅಭ್ಯರ್ಥಿಗಳಿಗೆ 27 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1<br>ಕ.ಮಾ-1 | | | ಇ-1 | | ಅಂ.ವಿ-1 | ಇ-1 | ಇ-3<br>ಮ-5<br>ಮಾ.ಸೈ-3<br>ಗ್ರಾ-7<br>ಕ.ಮಾ-1<br>ಅಂ.ವಿ-2<br>ಯೋ.ನಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ., ಬಿ.ಎಸ್‌ಸಿ., ಪದವಿ ಜೊತೆಗೆ Basic Knowledge of Computer Operation ಜ್ಞಾನ ಹೊಂದಿರಬೇಕು. ಯಾವುದಾದರೂ ರಾಷ್ಟ್ರೀಯ ಸಂಸ್ಥೆಗಳಲ್ಲಿ / ಮಲ್ಟಿನ್ಯಾಷಿನಲ್ ಕಂಪನಿಗಳಲ್ಲಿ /ಸರ್ಕಾರ ಸಾಮ್ಯತೆಗೆ ಒಳಪಟ್ಟ ಸಂಸ್ಥೆಗಳಲ್ಲಿ / ಚಾರ್ಟೆಡ್ ಅಕೌಂಟೆಟ್ ಫರ್ಮ್ಸ್/ಡೇರಿ ಆರ್ಗನೈಸೇಷನ್ಸ್ ಸಂಸ್ಥೆಗಳಲ್ಲಿ ಕನಿಷ್ಠ 2 ವರ್ಷಗಳ ಸೇವಾನುಭವ ಹೊಂದಿರಬೇಕು.

ಒಳಸೇವಾ ಅಭ್ಯರ್ಥಿಗಳಿಂದ/ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗಳಿಂದ ನಿಗದಿಪಡಿಸಿದ ಹುದ್ದೆಗಳು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಆಯಾಯ ವರ್ಗಕ್ಕೆ ಅನುಗುಣವಾಗಿ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**8.** (ಎ) **ಡೇರಿ ಸೂಪರ್‌ವೈಸರ್ ದರ್ಜೆ-2- ಎಲೆಕ್ಟ್ರಿಕಲ್ ವೇತನ ಶ್ರೇಣಿ: 17650-32000 - 02 ಹುದ್ದೆಗಳು:-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | ಇ-1 | | | | | | ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ತಾಂತ್ರಿಕ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾ ಸಂಸ್ಥೆಗಳಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಡಿಪ್ಲಮೋ ಇನ್ ಎಲೆಕ್ಟ್ರಿಕಲ್ ವಿದ್ಯಾರ್ಹತೆ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**8.** (ಬಿ)**ಡೇರಿ ಸೂಪರ್‌ವೈ.ಸರ್ ದರ್ಜೆ-2- ಮೆಕಾನಿಕಲ್/ಇನ್ಸ್ಟ್ರುಮೆಂಟೇಷನ್ ವೇತನ ಶ್ರೇಣಿ: 17650-32000 – 05 ಹುದ್ದೆಗಳು**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಗ್ರಾ-1<br>ಮ-1 | | ಗ್ರಾ-1 | ಇ-1 | | | ಗ್ರಾ-1 | |

**ಕನಿಷ್ಠ ವಿದ್ಯಾರ್ಹತೆ:-**

ತಾಂತ್ರಿಕ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾ ಸಂಸ್ಥೆಗಳಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಡಿಪ್ಲಮೋ ಇನ್ ಮೆಕಾನಿಕಲ್/ಇನ್ಸ್ಟ್ರುಮೆಂಟೇಷನ್ ವಿದ್ಯಾರ್ಹತೆ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**8.** (ಸಿ) **ಡೇರಿ ಸೂಪರ್‌ವೈಸರ್ ದರ್ಜೆ-2- ಸಿವಿಲ್ ವೇತನ ಶ್ರೇಣಿ: 17650-32000 - 01 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಇ-1 |

**ಕನಿಷ್ಠ ವಿದ್ಯಾರ್ಹತೆ:-**

ತಾಂತ್ರಿಕ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾ ಸಂಸ್ಥೆಗಳಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಡಿಪ್ಲಮೋ ಇನ್ ಸಿವಿಲ್ ವಿದ್ಯಾರ್ಹತೆ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**8.** (ಡಿ) **ಡೇರಿ ಸೂಪರ್‌ವೈಸರ್ ದರ್ಜೆ-2- ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ಸ್ /ಕಂಪ್ಯೂಟರ್ ಸೈನ್ಸ್ ವೇತನ ಶ್ರೇಣಿ: 17650-32000 - 02 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | ಅಂ.ವಿ-1 | | | | | ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ತಾಂತ್ರಿಕ ಮಂಡಳಿಯಿಂದ ಮಾನ್ಯತೆ ಪಡೆದ ವಿದ್ಯಾ ಸಂಸ್ಥೆಗಳಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಡಿಪ್ಲಮೋ ಇನ್ ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಷನ್ಸ್ /ಕಂಪ್ಯೂಟರ್ ಸೈನ್ಸ್ ವಿದ್ಯಾರ್ಹತೆ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**9. ಆಡಳಿತ ಸಹಾಯಕ ದರ್ಜೆ-2 ವೇತನ ಶ್ರೇಣಿ: 14550-26700 - 20 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-2<br>ಕ.ಮಾ-1 | ಗ್ರಾ-1 | ಇ-1<br>ಮ-1 | ಇ-1<br>ಮ-2<br>ಕ.ಮಾ-1 | | ಅಂ.ವಿ-1 | ಇ-1 | ಇ-2<br>ಮ-2<br>ಗ್ರಾ-2<br>ಕ.ಮಾ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಬಿ.ಬಿ.ಎಂ/ಬಿ.ಬಿ.ಎ/ಬಿ.ಕಾಂ/ಬಿ.ಎಸ್‌ಸಿ.,/ಬಿ.ಸಿ.ಎ ಪದವಿ ಹೊಂದಿರಬೇಕು ಜೊತೆಗೆ Basic Knowledge of Computer Operation ಜ್ಞಾನ ಹೊಂದಿರಬೇಕು ಹಾಗೂ ಕನಿಷ್ಠ 06 ತಿಂಗಳ ಅವಧಿಯ ಕಂಪ್ಯೂಟರ್ ತರಬೇತಿ ಸರ್ಟಿಫಿಕೇಟ್ ಹೊಂದಿರಬೇಕು.

**10. ಜೂನಿಯರ್ ಸಿಸ್ಟಮ್ ಆಪರೇಟರ್ / ಕ್ಲರ್ಕ್ – ಕಂ – ಕಂಪ್ಯೂಟರ್ ಆಪರೇಟರ್ ವೇತನ ಶ್ರೇಣಿ: 14550-26700 - 20 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1<br>ಮ-1<br>ಗ್ರಾ-1 | ಮ-1 | | ಮ-1<br>ಗ್ರಾ-1<br>ಅಂ.ವಿ-1 | ಮ-1 | ಗ್ರಾ-1 | ಮ-1 | ಇ-2<br>ಮ-3<br>ಮಾ.ಸೈ-1<br>ಗ್ರಾ-3<br>ಯೋ.ನಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಬಿ.ಸಿ.ಎ., / ಬಿ.ಎಸ್‌ಸಿ.,(ಕಂಪ್ಯೂಟರ್ ಸೈನ್ಸ್) ಪದವಿ ಹೊಂದಿರಬೇಕು ಜೊತೆಗೆ Basic Knowledge of Nudi Kannada Software, Certificate ಹೊಂದಿರಬೇಕು.

## 11. ಲೆಕ್ಕ ಸಹಾಯಕ ದರ್ಜೆ-2 ವೇತನ ಶ್ರೇಣಿ: 14550-26700 - 06 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಅಂ.ವಿ-1 | ಗ್ರಾ-1 | | ಇ-1 | | | ಮ-1 | ಗ್ರಾ-1<br>ಮ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಕಾಂ ಪದವಿ ಹೊಂದಿರಬೇಕು ಹಾಗೂ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆ/ ಡೇರಿ ಆರ್ಗನೈಜೇಷನ್/ ಚಾರ್ಟ್‌ಡ್ ಅಕೌಂಟೆಂಟ್ ಫರ್ಮ್ಸ್‌ಗಳಲ್ಲಿ ಫೈನಾನ್ಸ್, ಮಾರ್ಕೆಟಿಂಗ್ ಅಂಡ್ ಅಕೌಂಟ್ಸ್‌ನಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

## 12. ಮಾರುಕಟ್ಟೆ ಸಹಾಯಕ ದರ್ಜೆ-2 ವೇತನ ಶ್ರೇಣಿ: 14550-26700 - 21 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1<br>ಮ-1<br>ಗ್ರಾ-1 | | | ಮಾ.ಸೈ-1 | | ಇ-1 | ಇ-1 | ಇ-3<br>ಮ-5<br>ಮಾ.ಸೈ-3<br>ಗ್ರಾ-2<br>ಕ.ಮಾ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಬಿ.ಎ., / ಬಿ.ಬಿ.ಎಂ.,/ ಬಿ.ಕಾಂ/ ಎಂ.ಬಿ.ಎ ಪದವಿಯೊಂದಿಗೆ ಮಾರ್ಕೆಟಿಂಗ್‌ನಲ್ಲಿ ಐಚ್ಛಿಕ ವಿಷಯವಾಗಿ ಅಭ್ಯಾಸಿಸರಬೇಕು ಹಾಗೂ ಮಹಾನಗರಗಳಲ್ಲಿ ಎಫ್.ಎಸ್.ಎಸ್.ಎ.ಐ ಮತ್ತು ಐ.ಎಸ್.ಒ 22000 ದೃಢೀಕರಣ ಹೊಂದಿದ, ದಿನಂಪ್ರತಿ ಕನಿಷ್ಠ 5 ಲಕ್ಷ ಲೀಟರ್ ಹಾಲು/ಮೊಸರು ಮಾರಾಟ ಸಾಮರ್ಥ್ಯ ಹೊಂದಿರುವ ಡೇರಿ ಇಂಡಸ್ಟ್ರಿಸ್‌ನಲ್ಲಿ ಕನಿಷ್ಠ 03 ವರ್ಷಗಳ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**13. ಕೆಮಿಸ್ಟ್ ದರ್ಜೆ-2 ವೇತನ ಶ್ರೇಣಿ: 14550-26700 - 23 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1<br>ಮ-1<br>ಮಾ.ಸೈ-1<br>ಗ್ರಾ-1 | ಇ-1 | ಗ್ರಾ-1 | ಇ-1<br>ಮ-2<br>ಗ್ರಾ-2 | ಇ-1<br>ಗ್ರಾ-1 | ಮ-1 | ಗ್ರಾ-1 | ಇ-2<br>ಮ-2<br>ಗ್ರಾ-3<br>ಯೋ.ನಿ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಬಿ.ಎಸ್‌ಸಿ ಕೆಮಿಸ್ಟ್ರಿ ಅಥವಾ ಮೈಕ್ರೋಬಯಾಲಜಿ ಪದವಿ ಹೊಂದಿರಬೇಕು ಜೊತೆಗೆ ನ್ಯಾಷನಲ್ ಕಂಪನಿ/ಮಲ್ಟಿ ನ್ಯಾಷನಲ್ ಕಂಪನಿ/ಸರ್ಕಾರಿ ಸಂಸ್ಥೆ/ ಡೇರಿ ಆರ್ಗನೈಜೇಷನ್/ ಫುಡ್ ಪ್ರೋಸೆಸಿಂಗ್ ಲ್ಯಾಬೋರೇಟರಿಸ್ ಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**14. ಶುಶ್ರೂಷಕರು ವೇತನ ಶ್ರೇಣಿ: 14550-26700 - 02 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | | | | | ಮ-1<br>ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ಮಾನ್ಯತೆ ಪಡೆದ ವಿಶ್ವವಿದ್ಯಾಲಯ/ವಿದ್ಯಾ ಸಂಸ್ಥೆಗಳಿಂದ ಬಿ.ಎಸ್‌ಸಿ ನರ್ಸಿಂಗ್/ಡಿಪ್ಲಮೋ ಇನ್ ನರ್ಸಿಂಗ್ ಜೊತೆಗೆ ನೊಂದಾಯಿತ ಆಸ್ಪತ್ರೆ/ಸಂಸ್ಥೆಗಳಲ್ಲಿ ಕನಿಷ್ಠ 02 ವರ್ಷ ಸೇವಾನುಭವ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

**15. (ಎ) ಕಿರಿಯ ತಾಂತ್ರಿಕ- ಎಲೆಕ್ಟ್ರಿಕಲ್ ವೇತನ ಶ್ರೇಣಿ: 11600-21000 - 10 ಹುದ್ದೆಗಳು :-**

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಗ್ರಾ-1<br>ಕ.ಮಾ-1 | | ಇ-1 | ಗ್ರಾ-1 | ಇ-1 | | | ಇ-2<br>ಮ-1<br>ಗ್ರಾ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಮಾನ್ಯತೆ ಪಡೆದ ಐ.ಟಿ.ಐ. ಸಂಸ್ಥೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.60 ಅಂಕಗಳೊಂದಿಗೆ ಎಲೆಕ್ಟ್ರಿಕಲ್ ಟ್ರೇಡ್ ಸರ್ಟಿಫಿಕೇಟ್ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

### 15. (ಬಿ) ಕಿರಿಯ ತಾಂತ್ರಿಕ- ಎಲೆಕ್ಟ್ರಾನಿಕ್ ಮೆಕಾನಿಕ್ ವೇತನ ಶ್ರೇಣಿ: 11600-21000 - 05 ಹುದ್ದೆಗಳು

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| | | | ಇ-1<br>ಮ-1 | | ಗ್ರಾ-1 | | ಮ-1<br>ಗ್ರಾ-1 |

**ಕನಿಷ್ಠ ವಿದ್ಯಾರ್ಹತೆ:-**

ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಮಾನ್ಯತೆ ಪಡೆದ ಐ.ಟಿ.ಐ. ಸಂಸ್ಥೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.೬೦ ಅಂಕಗಳೊಂದಿಗೆ ಎಲೆಕ್ಟ್ರಾನಿಕ್ ಮೆಕಾನಿಕ್ ಟ್ರೇಡ್ ಸರ್ಟಿಫಿಕೇಟ್ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

### 15. (ಸಿ) ಕಿರಿಯ ತಾಂತ್ರಿಕ - ರೆಫ್ರಿಜರೇಷನ್ ವೇತನ ಶ್ರೇಣಿ: 11600-21000 - 08 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1 | | | ಮ-1 | | | ಅಂ.ವಿ-1 | ಇ-1<br>ಮ-1<br>ಮಾ.ಸೈ-1<br>ಗ್ರಾ-2 |

**ಕನಿಷ್ಠ ವಿದ್ಯಾರ್ಹತೆ:-**

ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಮಾನ್ಯತೆ ಪಡೆದ ಐ.ಟಿ.ಐ. ಸಂಸ್ಥೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.೬೦ ಅಂಕಗಳೊಂದಿಗೆ ರೆಫ್ರಿಜರೇಷನ್ ಟ್ರೇಡ್ ಸರ್ಟಿಫಿಕೇಟ್ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

### 15. (ಡಿ) ಕಿರಿಯ ತಾಂತ್ರಿಕ-ಫಿಟ್ಟರ್/ಮೆಷಿನಿಸ್ಟ್ ವೇತನ ಶ್ರೇಣಿ: 11600-21000 - 10 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಮ-1 | | | ಕ.ಮಾ-1 | ಅಂ.ವಿ-1 | ಅಂ.ವಿ-1 | ಮ-1 | ಇ-1<br>ಮ-1<br>ಮಾ.ಸೈ-1<br>ಗ್ರಾ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಮಾನ್ಯತೆ ಪಡೆದ ಐ.ಟಿ.ಐ. ಸಂಸ್ಥೆಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.೬೦ ಅಂಕಗಳೊಂದಿಗೆ ಫಿಟ್ಟರ್/ಮೆಷಿನಿಸ್ಟ್ ಟ್ರೇಡ್ ಸರ್ಟಿಫಿಕೇಟ್ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

## 15. (ಇ) ಕಿರಿಯ ತಾಂತ್ರಿಕ-ಬಾಯ್ಲರ್ ವೇತನ ಶ್ರೇಣಿ: 11600-21000 - ೦5 ಹುದ್ದೆಗಳು :-

| ಮೀಸಲಾತಿ ವರ್ಗೀಕರಣ | | | | | | | |
|---|---|---|---|---|---|---|---|
| ಪ.ಜಾ | ಪ.ಪಂ | ಪ್ರ-1 | 2A | 2B | 3A | 3B | ಸಾಮಾನ್ಯ |
| ಇ-1 | ಇ-1 | | | | | ಮ-1 | ಮ-1<br>ಅಂ.ವಿ-1 |

**ಕನಿಷ್ಠ ವಿದ್ಯಾರ್ಹತೆ:-**

ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.50 ಅಂಕಗಳೊಂದಿಗೆ ಹಾಗೂ ಇತರೆ ಅಭ್ಯರ್ಥಿಗಳು ಸರಾಸರಿ ಕನಿಷ್ಠ ಶೇ.೬೦ ಅಂಕಗಳೊಂದಿಗೆ ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಎರಡನೆ ದರ್ಜೆಯ ಬಾಯ್ಲರ್ ಸರ್ಟಿಫಿಕೇಟ್ ಹೊಂದಿರಬೇಕು. ಜೊತೆಗೆ Basic knowledge of Computer Operation ಜ್ಞಾನ ಹೊಂದಿರಬೇಕು.

ಇ - ಇತರೆ ಅಭ್ಯರ್ಥಿ, ಮ - ಮಹಿಳಾ ಅಭ್ಯರ್ಥಿ, ಮಾ.ಸೈ. - ಮಾಜಿ ಸೈನಿಕ, ಗ್ರಾ - ಗ್ರಾಮೀಣ ಅಭ್ಯರ್ಥಿ, ಕ.ಮಾ. – ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದವರು, ಅಂ.ವಿ.-ಅಂಗವಿಕಲ, ಯೋ. ನಿ. – ಯೋಜನಾ ನಿರಾಶ್ರಿತರು.

ಮಹಿಳೆ/ಗ್ರಾಮೀಣ/ಕಮಾ/ಯೋಜನಾ ನಿರಾಶ್ರಿತ/ಮಾಜಿ ಸೈನಿಕ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಸೂಚನೆಗಳು:**

- ಒಕ್ಕೂಟದಲ್ಲಿ ಖಾಲಿ ಇರುವ ಈ ಮೇಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಂಬಂಧ ನೇಮಕಾತಿ ಪ್ರಕ್ರಿಯೆಯ ಪೂರ್ಣ ವಿವರಗಳನ್ನು ಒಕ್ಕೂಟದ ಜಾಲ ತಾಣದಿಂದ website: www.bamulnandini.coop ಅಥವಾ www.recruit-app.com/bamul2017 ರಲ್ಲಿ ಪಡೆದು ತಾಕ್ಷಣಿಕ ಸೇವೆಯ (ONLINE) ಮೂಲಕವೇ ಅರ್ಜಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು ಭಾರತೀಯ ನಾಗರೀಕನಾಗಿರತಕ್ಕದ್ದು.
- ಅಭ್ಯರ್ಥಿಗಳು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ ಮೊದಲು ಸಲ್ಲಿಸಿದ ಅರ್ಜಿಯನ್ನು ಮಾತ್ರ ಮಾನ್ಯ ಮಾಡಲಾಗುವುದು.
- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಈಗಾಗಲೇ ನೊಂದಣಿ ಮಾಡಿಕೊಂಡಿರುವ ನೊಂದಣಿ ಸಂಖ್ಯೆಯಡಿಯಲ್ಲಿಯೇ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು.

(stamp)

- ಅರ್ಜಿ ನಮೂನೆಯನ್ನು ಒಕ್ಕೂಟದ ಜಾಲ ತಾಣದ ಮೂಲಕ ಡೌನ್ ಲೋಡ್ ಮಾಡಿಕೊಂಡು ಮುದ್ರಿಸಿ ಖುದ್ದಾಗಿ / ಅಂಚೆ / ಕೋರಿಯರ್ ಮೂಲಕ ಸಲ್ಲಿಸಿದಲ್ಲಿ ಅವುಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಮಾಹಿತಿಗಳನ್ನು ನೀಡಿದ್ದಲ್ಲಿ ಅಂತಹ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳದೆ ತಿರಸ್ಕರಿಸಲಾಗುವುದು.
- ನಿಗದಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಅವಧಿಯಲ್ಲಿ ಇಬ್ಬರು ಗಣ್ಯ ವ್ಯಕ್ತಿಗಳಿಂದ ಪಡೆದಿರುವ ನಡತೆ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು.

**I) ವಯೋಮಿತಿ:**

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ: 10.08.2017 ರಂದು ಕನಿಷ್ಟ/ಗರಿಷ್ಟ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ಕ್ರ. ಸಂ. | ಮೀಸಲಾತಿ ವರ್ಗೀಕರಣ | ಕನಿಷ್ಟ ವಯೋಮಿತಿ | ಗರಿಷ್ಟ ವಯೋಮಿತಿ |
|---|---|---|---|
| 1 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ 1 | 18 | 40 |
| 2 | ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ | 18 | 38 |
| 3 | ಸಾಮಾನ್ಯ ಅರ್ಹತೆ | 18 | 35 |

ಮಾಜಿ ಸೈನಿಕರಿಗೆ ಅವರು ಸೇನೆಯಲ್ಲಿ ಸೇವೆ ಸಲ್ಲಿಸಿರುವ ಅವಧಿಗೆ ಹಾಗೂ ಅಂಗವಿಕಲರು ಮತ್ತು ವಿಧವೆಯರಿಗೆ 10 ವರ್ಷಗಳ ಅವಧಿಗೆ ವಯೋಮಿತಿ ಸಡಿಲಿಕೆ ಇರುತ್ತದೆ.

ಬೆಂಗಳೂರು ಸಹಕಾರ ಹಾಲು ಒಕ್ಕೂಟದ ಒಳಸೇವಾ ಅಭ್ಯರ್ಥಿಗಳಿಗೆ ಅವರು ಒಕ್ಕೂಟದಲ್ಲಿ ಸೇವೆ ಸಲ್ಲಿಸಿದ ಅವಧಿ ಅಥವಾ 15 ವರ್ಷದ ಅವಧಿ ಇದರಲ್ಲಿ ಯಾವುದು ಕಡಿಮೆಯೋ ಆ ಅವಧಿಗೆ ವಯೋಮಿತಿ ಸಡಿಲಿಕೆ ಇರುತ್ತದೆ.

ಒಕ್ಕೂಟದ ವ್ಯಾಪ್ತಿಗೆ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿಗಳಿಗೆ ಅವರು ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಅಂದಿನ ನಿಯಮಗಳಿಗೆ ಒಳಪಟ್ಟು ಸೇವೆಗೆ ಸೇರಿದ್ದಲ್ಲಿ ಅವರು ಸಂಘಗಳಲ್ಲಿ ಸೇವೆ ಸಲ್ಲಿಸಿದ ಅವಧಿಗೆ ವಯೋಮಿತಿ ಸಡಿಲಿಕೆ ಇರುತ್ತದೆ.

**II) ಆಯ್ಕೆ ವಿಧಾನ:**

**ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ.ಸಿಒ/166/ಸಿಎಲ್‌ಎಂ/2012 ದಿನಾಂಕ: 22-08-2013 ರ ಅನ್ವಯ ಹುದ್ದೆಗಳ ನೇಮಕಾತಿಗೆ ಲಿಖಿತ ಪರೀಕ್ಷೆಯನ್ನು ಏರ್ಪಡಿಸಲಾಗುವುದು.**

**ಪದವಿ ವಿದ್ಯಾರ್ಹತೆ ಅವಶ್ಯವಿರುವ ಹುದ್ದೆಗಳಿಗೆ ಕನ್ನಡ ಭಾಷೆಗೆ 40 ಅಂಕಗಳು, ಆಂಗ್ಲ ಭಾಷೆಗೆ 30 ಅಂಕಗಳು, ಸಾಮಾನ್ಯ ಜ್ಞಾನಕ್ಕೆ 30 ಅಂಕಗಳು ಮತ್ತು ಸಹಕಾರ ವಿಷಯಕ್ಕೆ 100 ಅಂಕಗಳು, ಒಟ್ಟು 200 ಅಂಕಗಳನ್ನು ನಿಗದಿಪಡಿಸಿ ಬಾಹ್ಯ ಮೂಲಗಳಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು.**

**ಡಿಪ್ಲಮೋ ಮತ್ತು ಐ.ಟಿ.ಐ ವಿದ್ಯಾರ್ಹತೆ ಅವಶ್ಯವಿರುವ ಹುದ್ದೆಗಳಿಗೆ ಕನ್ನಡ ಭಾಷೆಗೆ 50 ಅಂಕಗಳು, ಸಾಮಾನ್ಯ ಜ್ಞಾನಕ್ಕೆ 50 ಅಂಕಗಳು ಮತ್ತು ಸಹಕಾರ ವಿಷಯಕ್ಕೆ 100 ಅಂಕಗಳು, ಒಟ್ಟು 200 ಅಂಕಗಳನ್ನು ನಿಗದಿಪಡಿಸಿ ಬಾಹ್ಯ ಮೂಲಗಳಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು.**

**ಲಿಖಿತ ಪರೀಕ್ಷೆಯಲ್ಲಿ (written examination) ಗಳಿಸಿದ ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು 1:5 ರ ಅನುಪಾತದಲ್ಲಿ ಮೌಖಿಕ ಪರೀಕ್ಷೆಗೆ ಕರೆಯಲಾಗುವುದು.**

**ಮೌಖಿಕ ಪರೀಕ್ಷೆಗೆ ಗರಿಷ್ಟ 15 ಅಂಕಗಳನ್ನು ನಿಗದಿಪಡಿಸಲಾಗಿದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ 85 ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳನ್ನು ಜೊತೆಗೆ ಮತ್ತು ಮೌಖಿಕ ಪರೀಕ್ಷೆಯಲ್ಲಿ ಗಳಿಸುವ ಅಂಕಗಳನ್ನು ಒಟ್ಟುಗೂಡಿಸಿ ಅಂತಿಮ ಅರ್ಹತಾ ಪಟ್ಟಿಯನ್ನು ತಯಾರಿಸಿ ಅರ್ಹತೆಯ ಆಧಾರದಲ್ಲಿ**

**ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಹಾಗೂ ಸಹಕಾರ ವಿಷಯದಲ್ಲಿ ಸ್ನಾತಕೋತ್ತರ ಪದವಿ / ಪದವಿ / ಡಿಪ್ಲೋಮಾ ಹೊಂದಿದ್ದಲ್ಲಿ ಒಂದು ವಿಶೇಷ ಕೃಪಾಂಕವನ್ನು ಸೇರಿಸಲಾಗುತ್ತದೆ. ಅಭ್ಯರ್ಥಿಗಳ ಅರ್ಹತೆಯ ಬಗ್ಗೆ ಒಕ್ಕೂಟದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.**

**III) ಮೀಸಲಾತಿಗಳು :**

ಜಾತಿ / ವರ್ಗ ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು ಇದಕ್ಕೆ ಸಂಬಂಧಿಸಿದಂತೆ ಸರ್ಕಾರವು ನಿಗದಿಪಡಿಸಿರುವ ನಮೂನೆಗಳಲ್ಲಿ ಹಾಗೂ ಚಾಲ್ತಿಯಲ್ಲಿರುವ ಅಗತ್ಯ ಪ್ರಮಾಣ ಪತ್ರವನ್ನು ಲಗತ್ತಿಸತಕ್ಕದ್ದು. (ವಿದ್ಯಾಭ್ಯಾಸ / ಶಿಕ್ಷಣಕ್ಕಾಗಿ / ಇತರೆ ಸರ್ಕಾರಿ ಸೌಲಭ್ಯಕ್ಕಾಗಿ ಅಥವಾ ಸಾಲಕ್ಕಾಗಿ ಪಡೆದಿರುವ ಜಾತಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ) ಮೀಸಲಿರಿಸಿದ ವರ್ಗಗಳಲ್ಲಿ ಮಹಿಳಾ, ಮಾಜಿ ಸೈನಿಕ, ಕನ್ನಡ ಮಾಧ್ಯಮ, ಗ್ರಾಮೀಣ ಹಾಗೂ ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಅದೇ ವರ್ಗಕ್ಕೆ ಸೇರಿದ ಇತರೆ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಎ) ಗ್ರಾಮೀಣ ಅಭ್ಯರ್ಥಿ :**

ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಹಾಗೂ ಜಾರಿ ದಿನಾಂಕದೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ. ಈ ಪ್ರಮಾಣ ಪತ್ರಗಳ ನಮೂನೆಗಳನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ).

**ಬಿ) ಅಂಗವಿಕಲ ಅಭ್ಯರ್ಥಿ :**

ಅಂಗವಿಕಲ ಮೀಸಲಾತಿ ಅಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ/ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ (ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ).

**ಸಿ) ಕನ್ನಡ ಮಾಧ್ಯಮ ಅಭ್ಯರ್ಥಿ** :

ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಜಾರಿ ದಿನಾಂಕ ಹಾಗೂ ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು(ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ).

**ಡಿ)ಯೋಜನೆಗಳಿಂದ ನಿರಾಶ್ರಿತಗೊಂಡ ಅಭ್ಯರ್ಥಿ (PDP)** :

ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ ಯೋಜನೆಗಳಿಂದ ನಿರ್ವಸಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರ್ವಸಿತರಾದ ಕುಟುಂಬ ಅಭ್ಯರ್ಥಿಗಳಿಗೆ ಈ ಮೀಸಲಾತಿ ಅನ್ವಯವಾಗುವುದಿಲ್ಲ). ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಸಂದರ್ಶನಕ್ಕೆ ಹಾಜರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು(ಈ ಪ್ರಮಾಣ ಪತ್ರದ ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ). ನಿಬಂಧಕರ ಆದೇಶ ಸಂಖ್ಯೆ. ಅನಿ/ಡಿಎವೈ-4/ಮೀಸಲಾತಿ/140/2016-17 ದಿನಾಂಕ:24.03.2017 ರಂತೆ ಒಕ್ಕೂಟದ ಯೋಜನೆಗಳಿಗೆ ಭೂಮಿ ನೀಡಿರುವ ಭೂಮಾಲೀಕರ ಕುಟುಂಬದ ಅಭ್ಯರ್ಥಿಗಳಿಗೆ ನಿಯಮಾನುಸಾರ ಯೋಜನಾ ನಿರಾಶ್ರಿತರ ಕೋಟಾದಡಿ ನೇಮಕಾತಿಗೆ ಪರಿಗಣಿಸಲಾಗುವುದು.

**ಇ)ಮಾಜಿ ಸೈನಿಕ ಅಭ್ಯರ್ಥಿ** :

ಮಾಜಿ ಸೈನಿಕ ಅಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂದಳ, ನೌಕಾದಳ ಮತ್ತು ವಾಯುದಳಗಳಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆ ಸಲ್ಲಿಸಿದ ವ್ಯಕ್ತಿ.

ಅಂದರೆ:

ಎ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ವ್ಯಕ್ತಿ.

ಬಿ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಗೆ ಅನರ್ಹನಾದವ ಅಥವಾ ವ್ಯಕ್ತಿಯ ಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.

ಸಿ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.

ಡಿ) ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದು ಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆದಿರುವ ವ್ಯಕ್ತಿ.

ಇ) ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿ.

1. ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
2. ಮಿಲಿಟರಿ ಸೇವೆಯಿಂದ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
3. ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು.

<u>ವಿವರಣೆ:</u>

ಎ) ಈ ಸೌಲಭ್ಯಕ್ಕೆ ಡಿಫೆನ್ಸ್ ಸೆಕ್ಯೂರಿಟಿ ಕಾರ್ಪ್ಸ್, ಜನರಲ್ ರಿಸರ್ವ ಇಂಜಿನೀಯರಿಂಗ್ ಕಾರ್ಪ್ಸ್, ಲೋಕ ಸಹಾಯಕ ಸೇವೆ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಅರ್ಹರಲ್ಲ.

ಬಿ) ಕೇಂದ್ರ ಸಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದರೂ ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಒಕ್ಕೂಟದ ಹುದ್ದೆಗೆ ನೇಮಕ ಹೊಂದುವಂತಿಲ್ಲ.

ಸಿ) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಪತ್ನಿ ಅಥವಾ ಪತಿ ಮತ್ತು ಮಕ್ಕಳು ಮತ್ತು ಮಲ ಮಕ್ಕಳು) ಮಾಜಿ ಸೈನಿಕ ಮೀಸಲಾತಿ ಪಡೆಯಲು ಅರ್ಹರಿರುತ್ತಾರೆ. ಆದರೆ ಅಂತಹವರುಗಳು ವಯೋಮಿತಿ ಸಡಿಲಿಕೆಯನ್ನು ಪಡೆಯಲು ಅರ್ಹರಿರುವುದಿಲ್ಲ.

<u>IV) ಶೈಕ್ಷಣಿಕ ವಿದ್ಯಾರ್ಹತೆ :</u>

ಅರ್ಜಿಗಳನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಬಂಧಿಸಿದ ಹುದ್ದೆಗಳಿಗೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ಯಾವುದೇ ಹುದ್ದೆಗೆ ಸೇವಾನುಭವವನ್ನು ನಿಗದಿಪಡಿಸಿದಾಗ ಅಭ್ಯರ್ಥಿಗಳು ವಿದ್ಯಾರ್ಹತೆ ಹೊಂದಿದ ನಂತರ ಆ ಸೇವಾನುಭವ ಹೊಂದಿರತಕ್ಕದ್ದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಹುದ್ದೆಗಳಿಗೆ ಅಗತ್ಯವಿರುವ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್ / ವರ್ಷಗಳಲ್ಲಿ ಎಲ್ಲಾ ವಿಷಯಗಳಿಗೆ (ಭಾಷೆಗಳು ಒಳಗೊಂಡಂತೆ) ನಿಗದಿಪಡಿಸಿರುವ ಗರಿಷ್ಟ ಅಂಕಗಳು ಮತ್ತು ಪಡೆದಿರುವ ಅಂಕಗಳನ್ನು ಪರಿಗಣಿಸಿ ಶೇಕಡಾವಾರು ಸರಾಸರಿ ಅಂಕಗಳನ್ನು ಸ್ಪಷ್ಟವಾಗಿ ನಮೂದಿಸುವುದು.

ಗ್ರೇಡ್ ಅಂಕಗಳನ್ನು ಪಡೆದ ಅಭ್ಯರ್ಥಿಗಳು ಅವರ ಗ್ರೇಡ್ ಅಂಕಗಳನ್ನು ಶೇಕಡವಾರು ಅಂಕಗಳಿಗೆ ಪರಿವರ್ತಿಸಿ ವಿಶ್ವವಿದ್ಯಾಲಯ ನೀಡಿರುವ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ಶೇಕಡಾವಾರು ಅಂಕಗಳನ್ನು ತಪ್ಪದೇ ನಮೂದಿಸಬೇಕು. ಪದವಿ ಎಂದರೆ ಅಭ್ಯರ್ಥಿಯು 10+2 ರ ವಿದ್ಯಾಭ್ಯಾಸದ ನಂತರ ಭಾರತದಲ್ಲಿಯ ಯಾವುದೇ ಅಂಗೀಕೃತ ವಿಶ್ವವಿದ್ಯಾನಿಲಯದಿಂದ ನಿಯತವಾಗಿ ತರಗತಿಗೆ ಹಾಜರಾಗಿ ಪಡೆದ ಕನಿಷ್ಟ ಮೂರು ವರ್ಷಗಳ ಅವಧಿಯ ಸಾಂಪ್ರದಾಯಿಕ ಪದವಿ. (10+2+3) ಸ್ನಾತಕೋತ್ತರ ಪದವಿ ಎಂದರೆ ಮೇಲೆ ತಿಳಿಸಿದ ಪದವಿಯೊಂದಿಗೆ ನಿಯತವಾಗಿ ತರಗತಿಗೆ ಹಾಜರಾಗಿ ಪಡೆದ ಕನಿಷ್ಟ ಎರಡು ವರ್ಷ ಅವಧಿಯ ಸಾಂಪ್ರದಾಯಿಕ ಸ್ನಾತಕೋತ್ತರ ಪದವಿ (10+2+3+2).

<u>ಅರ್ಜಿ ಶುಲ್ಕ</u> :

| | | |
|---|---|---|
| 1 | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ | ರೂ. 500/- + ಅಂಚೆ ಕಛೇರಿ ಶುಲ್ಕ ರೂ. 30 /- |
| 2 | ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಅರ್ಜಿ ಶುಲ್ಕ | ರೂ. 1000/- + ಅಂಚೆ ಕಛೇರಿ ಶುಲ್ಕ ರೂ. 30 /- |

- ಅಭ್ಯರ್ಥಿಗಳು ಅರ್ಜಿ ಭರ್ತಿ ಮಾಡಲು On-Line ನಲ್ಲಿ ನೀಡಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವುದು.
- ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು.
- ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

- ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಈಗಾಗಲೇ ನೊಂದಣಿ ಮಾಡಿಕೊಂಡಿರುವ ನೊಂದಣಿ ಸಂಖ್ಯೆಯಡಿಯಲ್ಲಿಯೇ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು.
- ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಕರ್ನಾಟಕ ರಾಜ್ಯದಲ್ಲಿನ ಯಾವುದೇ ವಿದ್ಯುನ್ಮಾನ ಪಾವತಿ (ಇ-ಪೇಮೆಂಟ್) **E-Payment Post Office,** ಅಂಚೆ ಕಛೇರಿಗೆ ತೆರಳಿ ನಿಗದಿತ ಶುಲ್ಕ + ಅಂಚೆ ಕಛೇರಿ ಶುಲ್ಕ ರೂ. ೩೦ /- ಅನ್ನು ಪಾವತಿ ಮಾಡತಕ್ಕದ್ದು.
- ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 11-08-2017 ರ ನಂತರ ಶುಲ್ಕವನ್ನು ಸಂದಾಯ ಮಾಡಿದ್ದಲ್ಲಿ ಅಂತಹವರ ಅರ್ಜಿಯನ್ನು ತಿರಸ್ಕರಿಸಲಾಗುವುದು. **ಡಿ.ಡಿ./ಚೆಕ್/ಪೋಸ್ಟಲ್ ಆರ್ಡರ್/ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ.**
- ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.
- ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.
- ಅರ್ಜಿಗಳನ್ನು ಭರ್ತಿ ಮಾಡಲು ಮತ್ತು ಶುಲ್ಕ ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ, ಆ ಮುಂದಿನ ಕೆಲಸದ ದಿನವು ಅರ್ಜಿಗಳನ್ನು ಭರ್ತಿ ಮಾಡಲು ಮತ್ತು ಶುಲ್ಕ ಪಾವತಿಸಲು ಕೊನೆಯ ದಿನಾಂಕವಾಗುವುದು.

1. **ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ: 10.07.2017**
2. **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 10.08.2017**
3. **ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 11.08.2017**
4. **ಅಂಚೆ ಕಛೇರಿಯ ಕಾರ್ಯದ ವೇಳೆಯೊಳಗೆ ಮಾತ್ರ**

ಅರ್ಜಿಗಳನ್ನು On-Line ಮೂಲಕ ಭರ್ತಿ ಮಾಡಿ ಅರ್ಜಿ ಶುಲ್ಕವನ್ನು ಅಂಚೆ ಕಛೇರಿಯ ಕೆಲಸದ ವೇಳೆಯೊಳಗೆ ಕರ್ನಾಟಕ ರಾಜ್ಯದ ಯಾವುದೇ ಎಲೆಕ್ಟ್ರಾನಿಕ್ ಅಂಚೆ ಕಛೇರಿಗಳಲ್ಲಿ(e-Payment post offices only) ಮಾತ್ರ ಸಂದಾಯ ಮಾಡಬಹುದಾಗಿರುತ್ತದೆ.

## V) ಸಾಮಾನ್ಯ ನಿಬಂಧನೆಗಳು:

ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.

ಎಸ್.ಎಸ್.ಎಲ್.ಸಿ. ಅಥವಾ ಇದಕ್ಕೆ ತತ್ಸಮವೆಂದು ರಾಜ್ಯ ಸರ್ಕಾರದಿಂದ ಘೋಷಿಸಲ್ಪಟ್ಟ ಇತರೆ ಯಾವುದೇ ಪರೀಕ್ಷೆಯಲ್ಲಿ ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಅಥವಾ ಐಚ್ಛಿಕ ವಿಷಯವಾಗಿ ಕಡ್ಡಾಯವಾಗಿ ವ್ಯಾಸಾಂಗ ಮಾಡಿರತಕ್ಕದ್ದು. (ಸಹಾಯಕ ವ್ಯವಸ್ಥಾಪಕರು(ಪ.ವೈ/ಕೃಗ) ಹುದ್ದೆಗಳಿಗೆ ಹೊರತುಪಡಿಸಿ)

ಪರೀಕ್ಷಾವಧಿ 2 ವರ್ಷ ಇರುತ್ತದೆ. ಅವಶ್ಯವಿದ್ದಲ್ಲಿ ಪರೀಕ್ಷಾವಧಿಯನ್ನು ವಿಸ್ತರಿಸಲಾಗುವುದು. ಪರೀಕ್ಷಾವಧಿಯಲ್ಲಿ ಅಭ್ಯರ್ಥಿಗಳ ಸೇವೆ ತೃಪ್ತಿಕರವಾಗಿದ್ದಲ್ಲಿ ಮಾತ್ರ ಅಂತಹವರ ಸೇವೆಯನ್ನು ಖಾಯಂಗೊಳಿಸಲಾಗುವುದು.

ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ / ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ. ಈ ನೇಮಕಾತಿ ಪ್ರಕಟಣೆಯನ್ನು ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ / ರದ್ದುಪಡಿಸುವ ಅಧಿಕಾರವನ್ನು ಒಕ್ಕೂಟವು ಹೊಂದಿರುತ್ತದೆ.

ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಅರ್ಜಿ ಸಲ್ಲಿಸುವಾಗಲೇ On-Line ನಲ್ಲಿ upload ಮಾಡಬೇಕು. ಹಾಗೂ ಉದ್ಯೋಗದಾತರಿಂದ ವೇತನವನ್ನು ಪಡೆದಿರುವ ದೃಢೀಕರಣ ಪತ್ರ ಹಾಗೂ ಬ್ಯಾಂಕ್ ಸ್ಟೇಟ್‌ಮೆಂಟ್‌ನ್ನು ಮೌಖಿಕ ಸಂದರ್ಶನದ ವೇಳೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

5. **ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು:**

**ಹಂತ1**: ಅಭ್ಯರ್ಥಿಗಳು ಒಕ್ಕೂಟದ ಅಧಿಕೃತ website: www.bamulnandini.coop ಅಥವಾ www.recruit-app.com/bamul2017 ಮೂಲಕ ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದತಕ್ಕದ್ದು ಮತ್ತು ಅಂತಿಮವಾಗಿ ನಿಯಮ ಮತ್ತು ಷರತ್ತುಗಳನ್ನು ಕೆಳಗಿನ ಚೆಕ್‌ಬಾಕ್ಸ್ ಅನ್ನು ಒತ್ತುವ ಮೂಲಕ ಒಪ್ಪಿಕೊಳ್ಳತಕ್ಕದ್ದು ಮತ್ತು **Open Application** ಗುಂಡಿಯನ್ನು ಒತ್ತಿ ಮುಂದುವರಿಯಿರಿ.


**ಹಂತ 2**: ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **Apply** ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿಮಾಡತಕ್ಕದ್ದು. ಅರ್ಜಿಯನ್ನು ಭರ್ತಿಮಾಡಿದ ನಂತರ ನಮೂದಿಸಿದ ವಿವರಗಳನ್ನು ಮತ್ತೊಮ್ಮೆ ಕೂಲಂಕಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ **Preview** ಗುಂಡಿಯನ್ನು ಒತ್ತಿ ಮುಂದುವರಿಯಿರಿ.

**ಹಂತ 3**: ನಿಮ್ಮ ಅರ್ಜಿಯ ಯಾವುದೇ ವಿವರಗಳ ಬದಲಾವಣೆ ಅಗತ್ಯವಿದ್ದರೆ ಪೂರ್ವದರ್ಶನ ಪುಟದಲ್ಲಿ **Edit** ಗುಂಡಿಯನ್ನು ಒತ್ತಿ ನಿಮ್ಮ ಅರ್ಜಿಯಲ್ಲಿನ ವಿವರಗಳು ಸರಿ ಇರುವುದನ್ನು ಖಚಿತಪಡಿಸಿಕೊಂಡು, ನಿಮ್ಮ ಸಹಿಯೊಂದಿಗಿನ ಪಾಸ್ ಪೋರ್ಟ್ ಗಾತ್ರದ ಸ್ಕ್ಯಾನ್ ಮಾಡಿದ ಭಾವಚಿತ್ರವನ್ನು ಅಪ್‌ಲೋಡ್ ಮಾಡುವ ಬಗ್ಗೆ **Next** ಗುಂಡಿಯನ್ನು ಒತ್ತಿ

**Note**: ಈ ಹಂತದಲ್ಲಿ ಅಭ್ಯರ್ಥಿಯು ನೊಂದಾಯಿಸಿದ ಇಮೇಲ್ ವಿಳಾಸಕ್ಕೆ ಒಂದು ಸ್ವಯಂಚಾಲಿತ ಇಮೇಲ್ ಮೂಲಕ ಅವರ **Registration Id** ಮತ್ತು **Password** ಅನ್ನು ಕಳುಹಿಸಲಾಗುವುದು. ಅಭ್ಯರ್ಥಿಯು **Edit Application** ಗುಂಡಿಯನ್ನು ಒತ್ತಿ, ಅವರ **Registration Id** ಮತ್ತು **Password** ಅನ್ನು ಬಳಸಿ ತಮ್ಮ ವಿವರಗಳನ್ನು ಅಪ್‌ಲೋಡ್ ಮಾಡಬಹುದು ಅಥವಾ ಅಪ್‌ಲೋಡ್ ಮಾಡಿದ ಮಾಹಿತಿಯನ್ನು ಬದಲಾಯಿಸಬಹುದು.

**ಹಂತ 4**: ನೀವು ಸ್ವಸಹಿಯೊಂದಿಗಿನ ಸ್ಕ್ಯಾನ್ ಮಾಡಿದ ಪಾಸ್ ಪೋರ್ಟ್ ಗಾತ್ರದ ಭಾವಚಿತ್ರವನ್ನು ಆಯ್ಕೆ ಮಾಡುವ ಬಗ್ಗೆ **Browse** ಗುಂಡಿಯನ್ನು ಒತ್ತಿ ಮತ್ತು ನಿಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಪೂರ್ವದರ್ಶನ ಮಾಡಲು **Submit** ಗುಂಡಿಯನ್ನು ಒತ್ತಿ. ಒಂದು ವೇಳೆ ತಪ್ಪಾದ ಭಾವಚಿತ್ರವನ್ನು ಅಪ್‌ಲೋಡ್ ಮಾಡಿದ್ದಲ್ಲಿ ಮೇಲಿನ ಕ್ರಮವನ್ನು ಪುನರಾವರ್ತಿಸಿ ಅಥವಾ ಮುಂದಿನ ಪುಟದ ಬಗ್ಗೆ **Next** ಗುಂಡಿಯನ್ನು ಒತ್ತಿ. ಅಭ್ಯರ್ಥಿಯು ಈ ಹಂತದಲ್ಲಿ **Next** ಗುಂಡಿಯನ್ನು ಒತ್ತಿದರೆ ತಮ್ಮ ಅರ್ಜಿಯಲ್ಲಿನ ಯಾವುದೇ ವಿವರವನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ.

ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಅಭ್ಯರ್ಥಿಯು ತನ್ನ ಇತ್ತೀಚಿನ ಭಾವಚಿತ್ರವನ್ನು ಖಾಲಿ ಬಿಳಿ ಕಾಗದದ ಮೇಲೆ ಇರಿಸಿ, ಕಪ್ಪು ನಕ್ಷೆ/ಮಾರ್ಕರ್ ಪೆನ್ನಿನಿಂದ ಭಾವಚಿತ್ರದ ಸರಿ ಕೆಳಗೆ ಸಹಿ ಮಾಡಿರುವುದನ್ನು ಮತ್ತು ಅಂಕಣದೊಳಗೆ ಇರುವುದನ್ನು ಖಚಿತಪಡಿಸಿಕೊಳ್ಳುವುದು. ಯಾವುದೇ ಕಾರಣಕ್ಕೂ ಭಾವ ಚಿತ್ರದ ಮೇಲೆ ಸಹಿ ಮಾಡಬಾರದು.

| ಕಡತ ಗಾತ್ರ<100ಕೆ.ಬಿ | ಪಾಸ್ ಪೋರ್ಟ್ ಭಾವಚಿತ್ರ ಮತ್ತು ಸಹಿ ಅಳತೆ |
|---|---|
| ಡಿಪಿಐ ಸೆಟ್ಟಿಂಗ್ =100 ಡಿಪಿಐ |   |
| ಆಕೃತಿ ಪ್ರಮಾಣ =100% | |
| ಬಣ್ಣ | |
| ಜೆ ಪಿ ಜಿ/ಜೆ ಪಿ ಇ ಜಿ | |

**Note**: ಅಭ್ಯರ್ಥಿಯು **Photo Upload** ಗುಂಡಿಯನ್ನು ಒತ್ತಿ, ಅವರ **Registration Id** ಮತ್ತು **Password** ಅನ್ನು ಬಳಸಿ ತಮ್ಮ ಸಹಿಯೊಂದಿಗಿನ ಭಾವಚಿತ್ರವನ್ನು ಅಪ್‌ಲೋಡ್ ಮಾಡಬಹುದು ಅಥವಾ ತಪ್ಪಾದಲ್ಲಿ ಅದನ್ನು ಬದಲಾಯಿಸಬಹುದು. ಒಂದು ವೇಳೆ ಅಭ್ಯರ್ಥಿಯು ತಮ್ಮ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡದಿದ್ದರೆ ಅವರ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

ಹಂತ 5: **ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾನುಭವ, ಮೀಸಲಾತಿ, (ಜಾತಿ ಪ್ರಮಾಣ ಪತ್ರ, ಅಂಗವಿಕಲ ದೃಢೀಕರಣ ಪತ್ರ, ಕನ್ನಡ ಮಾಧ್ಯಮ, ಮಾಜಿ ಸೈನಿಕ, ಯೋಜನಾ ನಿರಾಶ್ರಿತ, ಗ್ರಾಮೀಣ ಪ್ರಮಾಣ), ವಯೋಮಿತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳಿಗೆ ಗೆಜೆಟೆಡ್ ಸರ್ಕಾರಿ ಅಧಿಕಾರಿಯಿಂದ ದೃಢೀಕರಿಸಿ ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕಾನ್ ಮಾಡಿ Upload ಮಾಡತಕ್ಕದ್ದು ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು** ತಿರಸ್ಕರಿಸಲಾಗುವುದು.

ಹಂತ 6: ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಹಾಗೂ ಉದ್ಯೋಗದಾತರಿಂದ ವೇತನವನ್ನು ಪಡೆದಿರುವ ದೃಢೀಕರಣ ಪತ್ರ ಮತ್ತು ಬ್ಯಾಂಕ್ ಸ್ಟೇಟ್‌ಮೆಂಟ್‌ನ್ನು On-Line ನಲ್ಲಿ upload ಮಾಡತಕ್ಕದ್ದು

**ಹಂತ 7**: ಅರ್ಜಿಯ ಮುದ್ರಣವನ್ನು ಪಡೆಯಲು **Print Application** ಗುಂಡಿಯನ್ನು ಒತ್ತಿ, ಅನಂತರವೇ **Application Preview** ಮೂಡಲಿದ್ದು, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ **Download** ಮಾಡಿಕೊಳ್ಳತಕ್ಕದ್ದು. **BAMUL** ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರುಪಡಿಸಬೇಕು.

**ಹಂತ 8**: ನಂತರ ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ **Post Office Challan** ಗುಂಡಿಯನ್ನು ಒತ್ತಿ **challan** ಪ್ರತಿಯನ್ನು **Download** ಮಾಡಿಕೊಂಡು ಕರ್ನಾಟಕ ರಾಜ್ಯದಲ್ಲಿನ ಯಾವುದೇ ಇ-ಪಾವತಿ ಅಂಚೆ ಕಛೇರಿಗೆ ಹೋಗಿ, **ನಿಗದಿತ ಅರ್ಜಿ ಶುಲ್ಕ + ಸೇವಾ ತೆರಿಗೆ (ರೂ 30/-) ಯನ್ನು** ಪಾವತಿ ಮಾಡಿ ಅಂತಿಮವಾಗಿ **ಪೋಸ್ಟ್ ಆಫೀಸ್ ಸ್ಟಿಕ್ಕರ್** ಅನ್ನು ನಿಮ್ಮ **challan** ಪ್ರತಿಯ ಮೇಲೆ ಅಂಟಿಸುವುದರಿಂದ ನಿಮ್ಮ ಶುಲ್ಕ ಪಾವತಿಯನ್ನು ದೃಢಪಡಿಸಲಾಗುತ್ತದೆ.

**Note:** ಶುಲ್ಕವನ್ನು ಪಾವತಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 11-08-2017 ರ ನಂತರ ಶುಲ್ಕವನ್ನು ಸಂದಾಯ ಮಾಡಲು ಅವಕಾಶವಿರುವುದಿಲ್ಲ. ಡಿ.ಡಿ., ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಸಂದಾಯ ಮಾಡದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

**ಅಭ್ಯರ್ಥಿಗಳು On-Line ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳ ಪ್ರತಿಯನ್ನು ಸರ್ಕಾರಿ ಗೆಜೆಟೆಡ್ ಅಧಿಕಾರಿಯಿಂದ ದೃಢೀಕರಿಸಿ ಅಪ್‌ಲೋಡ್ ಮಾಡತಕ್ಕದ್ದು. ಆದರೆ ಈ ಕೆಳಕಂಡ ಪ್ರಮಾಣ ಪತ್ರಗಳನ್ನು/ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಅಂದರೆ, ದಿನಾಂಕ: 10-08-2017 ರೊಳಗೆ ಪಡೆದಿರಬೇಕು ಇಲ್ಲವೇ ಸಿಂಧುವಾಗಿರಬೇಕು ಹಾಗೂ ಒಕ್ಕೂಟವು ಪರಿಶೀಲನೆಗಾಗಿ ಹಾಜರುಪಡಿಸಲು ಸೂಚಿಸಿದಾಗ ಅರ್ಜಿಯಲ್ಲಿ ನಮೂದಿಸಿರುವ ಮೀಸಲಾತಿಯ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗುವುದು.**

1. ಕಡ್ಡಾಯವಾಗಿ ಹಾಜರು ಪಡಿಸಬೇಕಾದ ವಿದ್ಯಾರ್ಹತೆ/ಅನುಭವ/ಜನ್ಮ ದಿನಾಂಕ ಹಾಗೂ ಅಗತ್ಯ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ ಅಭ್ಯರ್ಥಿಯ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.
2. ವಿವಿಧ ಮೀಸಲಾತಿ ಕೋರಿ ಹಾಜರು ಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರು ಪಡಿಸದಿದ್ದಲ್ಲಿ: ಆ ಮೀಸಲಾತಿಯನ್ನು ರದ್ದುಪಡಿಸಿ ಸಾಮಾನ್ಯ ಅರ್ಹತೆಯಲ್ಲಿ ಅರ್ಹತೆಯನ್ನು ಹೊಂದಿದ್ದಲ್ಲಿ ಮಾತ್ರ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಪರಿಗಣಿಸಲಾಗುವುದು.

**ಮೌಖಿಕ ಸಂದರ್ಶನದ ವೇಳೆ/ಒಕ್ಕೂಟವು ಯಾವುದೇ ಸಂದರ್ಭದಲ್ಲಿ ಪರಿಶೀಲನೆಗೆ ಸೂಚಿಸಿದಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು** :

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ / ಎಲ್ಲಾ ಸೆಮಿಸ್ಟರ್‌ಗಳ / ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record) / ಜನನ ಪ್ರಮಾಣ ಪತ್ರ
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.
4. ಸೇವಾನುಭವ ಪ್ರಮಾಣ ಪತ್ರ ಮತ್ತು ವೇತನ ಪಡೆದಿರುವ ಬಗ್ಗೆ ವೇತನ ಪ್ರಮಾಣ ಪತ್ರ ಮತ್ತು Bank Statement
5. ಕಂಪ್ಯೂಟರ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವಂತೆ ಜ್ಞಾನ ಹೊಂದಿರುವ ಪ್ರಮಾಣ ಪತ್ರಗಳು
6. ಅಭ್ಯರ್ಥಿಗಳು ಸಹಕಾರ ವಿಷಯದಲ್ಲಿ ಪದವಿ / ಸ್ನಾತಕೋತ್ತರ ಪದವಿ / ಡಿಪ್ಲೋಮಾ ಹೊಂದಿದ್ದಲ್ಲಿ ಸಂಬಂಧಿಸಿದ ಪ್ರಮಾಣ ಪತ್ರಗಳು/ಅಂಕಪಟ್ಟಿಗಳು
7. ಇಬ್ಬರು ಸ್ಥಳೀಯ ಗಣ್ಯ ವ್ಯಕ್ತಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ

**ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು** :

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ, ಪ್ರವರ್ಗ-3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ **ಡಿ/ಇ/ಎಫ್** ನಲ್ಲಿ ತಹಶೀಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ.
2. ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ
3. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ
4. ಕನ್ನಡ ಮಾಧ್ಯಮ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ಪ್ರಮಾಣ ಪತ್ರ
5. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆ-3 ರಲ್ಲಿ ಪಡೆದ ಪ್ರಮಾಣ ಪತ್ರ

ಬೆಂಗಳೂರು ಗ್ರಾಮಾಂತರ ಹಾಗೂ ... ಸಂಘಗಳ ... ಒಕ್ಕೂಟ ...

**ಪ್ರಮುಖ ಸೂಚನೆಗಳು** :

1. ಅಭ್ಯರ್ಥಿಗಳು On-Line ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಲಿಖಿತ ಪರೀಕ್ಷೆಗೆ ಅರ್ಹರೆ ಎಂಬುದನ್ನು ಒಕ್ಕೂಟವು ಪರಿಶೀಲಿಸಿ ಮೇಲು ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಅನುಭವ ಹಾಗೂ ವಯೋಮಿತಿ ಸಡಿಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಆನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.
3. **ಅಭ್ಯರ್ಥಿಗಳು ವಿದ್ಯಾರ್ಹತೆ, ಅನುಭವ, ಮೀಸಲಾತಿ, ವಯೋಮಿತಿ ಮುಂತಾದ ಅವಶ್ಯಕ ದಾಖಲೆಗಳನ್ನು ಸರ್ಕಾರಿ ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿದ ಪ್ರತಿಗಳನ್ನು ಆನ್-ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಪೂರ್ಣವಾಗಿರುವ, ಫೋಟೋ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**
4. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬೇಕಾದಲ್ಲಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ (No objection certificate) ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದು ಸಲ್ಲಿಸತಕ್ಕದ್ದು. (ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ)
5. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.

**ಲಿಖಿತ ಪರೀಕ್ಷೆಗೆ ಪತ್ರ** :

ಒಕ್ಕೂಟವು ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳ ಪಟ್ಟಿಯನ್ನು ಹಾಗೂ ಲಿಖಿತ ಪರೀಕ್ಷೆಯ ದಿನಾಂಕವನ್ನು ಒಕ್ಕೂಟದ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗುವುದು ಮತ್ತು ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಕರೆ ಪತ್ರಗಳನ್ನು ಶೀಘ್ರ ಅಂಚೆ (Speed Post) ಮೂಲಕ ಕಳುಹಿಸಲಾಗುವುದು.

**ಒಕ್ಕೂಟದೊಡನೆ ಪತ್ರ ವ್ಯವಹಾರ** :

ಒಕ್ಕೂಟವು ಅಭ್ಯರ್ಥಿತ್ವದ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ (ಬೆಳಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆವರೆಗೆ) ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆಗಳು:

ಸಹಾಯವಾಣಿ (Help Line) :7259270641

ಒಕ್ಕೂಟದ ಕೇಂದ್ರ ಕಛೇರಿ ಮಾಹಿತಿ ಕೇಂದ್ರ :08026096207

**ದುರ್ನಡತೆ** :

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು

ಪ್ರಯತ್ನಿಸುತ್ತಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಮುಂದೆ ಒಕ್ಕೂಟವು ನೇಮಕಾತಿ ಮಾಡುವ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

<u>ನಿರ್ಬಂಧ</u> :

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ,
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ,
3. ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
4. ಭಾರತ ದೇಶದ ಸಾರ್ವಭೌಮ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ,
6. ವ್ಯಕ್ತಿಯು ನ್ಯಾಯಬಾಹಿರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.

(ಡಿ.ಸಿ ನಾಗರಾಜಯ್ಯ)

ವ್ಯವಸ್ಥಾಪಕ ನಿರ್ದೇಶಕರು
ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ
ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿ., ಬೆಂಗಳೂರು

(ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ – ಡಿ

(ನಿಯಮ 3ಎ (2) (3) ನೋಡಿ)

**ಅನುಸೂಚಿತ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

## ಪ್ರಮಾಣ ಪತ್ರ

............................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................ ಜಿಲ್ಲೆಯ / ವಿಭಾಗದ ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ ................................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .................................. ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ☐ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
- ☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
- ☐ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
- ☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

  (ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)
- ☐ ಸಂವಿಧಾನ
- ☐ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
- ☐ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ☐ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962
- ☐ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
- ☐ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
- ☐ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988
- ☐ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ...............................................................................................ರಾಜ್ಯ/ಕೇಂದ್ರಾಡಳಿತ ಪ್ರದೇಶದ ............................................................... ಜಿಲ್ಲಾ/ವಿಭಾಗದ ..........................................ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ.........................................................

ತಹಶೀಲ್ದಾರ್.........................................

ಸ್ಥಳ :

ಪದನಾಮ

ದಿನಾಂಕ:

ಕಛೇರಿಯ ಮೊಹರಿನೊಂದಿಗೆ

(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ - ಇ

(ನಿಯಮ 3ಎ (2) (3) ನೋಡಿ)

## ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ

______________________ ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ ______________________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ______________________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ______________ ಜಾತಿಯ ______________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ : ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

## ನಮೂನೆ - ಎಫ್

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

______________________ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ __________________ ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ________________ ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರೀಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

*ಅಥವಾ*

ಸಾರ್ವಜನಿಕ ವಲಯ ಉದ್ಯಮಯಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

*ಅಥವಾ*

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 6000-11200/- ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

*ಅಥವಾ*

ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯ ಆದಾಯವು ಎರಡು ಲಕ್ಷಮೀರುವುದಿಲ್ಲವೆಂದು;

**ಅಥವಾ**

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ / ಪೋಷಕರು / ಪತ್ನಿ / ಪತಿಯು ಮಾರಾಟ ತೇರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಶ್ರೀ / ಶ್ರೀಮತಿ / ಕುಮಾರಿ______________ಇವರು _____________ ಜಾತಿಗೆ ____________________ ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ ________________ (2ಎ, 2ಬಿ, 3ಎ, 3ಬಿ)ಕ್ಕೆ ಸೇರಿರುತ್ತಾರೆ.

ಸ್ಥಳ :

**ತಹಶೀಲ್ದಾರ್**

ದಿನಾಂಕ:

__________**ತಾಲ್ಲೂಕು**

**ಕಛೇರಿಯ ಮೊಹರು**

ಸೂಚನೆ: 1) **ಸರ್ಕಾರದ ಆದೇಶ ಸಂಖ್ಯೆ: ಹಿಂವಕ 148 ಬಿಸಿಎ 2015, ದಿನಾಂಕ**: 04-06-2015ರಂತೆ **ಹಿಂದುಳಿದ ವರ್ಗಗಳ ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ಕೆನೆಪದರಕ್ಕೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ ತಂದೆ-ತಾಯಿ, ಪೋಷಕರ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross Annual Income)** ' 4.50 ಲಕ್ಷಗಳಿಂದ ' 6.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. **ಆದುದರಿಂದ, ಮೀಸಲಾತಿ ಪ್ರಮಾಣಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ**: 04-06-2015ರ ಸರ್ಕಾರಿ **ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ನೀಡತಕ್ಕದ್ದು.**

2) **ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡೇ ಸದರಿ ಮೀಸಲಾತಿಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ ಮೀಸಲಾತಿ ಪ್ರಮಾಣ ಪತ್ರಗಳನ್ನು ಮಾಡಿಸಲು ಸೂಚಿಸಿದೆ.**

# ನಮೂನೆ – 1

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:
ತಹಶೀಲ್ದಾರರು
_______________ತಾಲ್ಲೂಕು
_______________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ________________________ ಎಂಬುವವರ ಮಗ / ಮಗಳು / ಪತಿ / ಪತ್ನಿ ________________________ ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

## ಪ್ರಮಾಣೀಕೃತ ಘೋಷಣೆ

**ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.**

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

**ದಿನಾಂಕ:** (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

### ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

### ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ____________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ____________ ಎಂಬುವವರು ಕರ್ನಾಟಕ ರಾಜ್ಯದ ________ಜಿಲ್ಲೆಯ ವಿಭಾಗ ____________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ____________ ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ: ____________ತಾಲ್ಲೂಕು

**ಕಛೇರಿಯ ಮೊಹರು**

**ಸೂಚನೆ-1** : ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ-2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು

## ನಮೂನೆ – 2

## ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ______________________________ ರವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ______________________ ಜಿಲ್ಲೆ ____________________ ತಾಲ್ಲೂಕು______________ ಗ್ರಾಮದಲ್ಲಿ ________________ ವಾಸವಾಗಿರುವ ಇವರು ಒಂದನೇ ತರಗತಿಯಿಂದ __________ ತರಗತಿಯವರೆಗೆ ____________ ಜಿಲ್ಲೆ ______________ ತಾಲ್ಲೂಕು____________ ಪಟ್ಟಣ__________________ ಶಾಲೆಯಲ್ಲಿ ವ್ಯಾಸಂಗ ಮಾಡಿ __________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

| | |
|---|---|
| ಮೇಲು ರುಜು | ಸಹಿ |
| ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ |
| ಕಛೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು |

ಸ್ಥಳ :

ದಿನಾಂಕ :

## ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ / ಶ್ರೀಮತಿ................................................................ ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ............................................ ಜಿಲ್ಲೆ ............................................ ತಾಲ್ಲೂಕು ................................................. ಗ್ರಾಮದಲ್ಲಿ ವಾಸವಾಗಿರುವ ಇವರು ................................ ನೇ ತರಗತಿಯಿಂದ ................................ ನೇ ತರಗತಿವರೆಗೆ ................................ ಶೈಕ್ಷಣಿಕ ವರ್ಷದಿಂದ ................................ ಶೈಕ್ಷಣಿಕ ವರ್ಷದವರೆಗೆ ................................................................... ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ: **ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು**

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 44 ಸೆನೆನಿ 2001 ದಿನಾಂಕ: 27.07.2001

**ನಮೂನೆ – 3**

**ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ ______________________________ ಎಂಬುವವರ ಮಗ/ ಮಗಳು/ ಪತಿ/ ಪತ್ನಿ/ ಶ್ರೀ/ಶ್ರೀಮತಿ/ಕುಮಾರಿ ______________ ಜಿಲ್ಲೆ __________ ತಾಲ್ಲೂಕು ________ ಗ್ರಾಮದಲ್ಲಿ ವಾಸವಾಗಿರುವ ಇವರು : ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು __________________________ ಯೋಜನೆಗಾಗಿ ________________ ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ :-

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ :

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ :

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ತಹಶೀಲ್ದಾರ್

ದಿನಾಂಕ: ತಾಲ್ಲೂಕು/ಕಛೇರಿಯ ಮೊಹರು

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum ........................................................... son / wife / daughter of Shri ......................................................................Age .............................. old, male / female, Registration No ................................ is a case of .............................. He / She is physically disabled/visual disabled/speech & hearing disabled and has .......................... % (........................percent)

permanent (physical impairment visual impairment speech & hearing impairment) in relation to his / her ................................

**Note :**

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of .................... months/years. *

*    Strike out which is not applicable

(Recent Attested
Photograph showing
the disability
affixed here)

| | | |
|---|---|---|
| Orthopedic / Eye / ENT / Psychiatrist Member, Medical Board | Senior Specialist Member, Medical Board | Chairperson District Surgeon District, District Hospital |

Signature / Thumb impression
of the disabled person

## GOVERNMENT OF KARNATAKA

## DEPARTMENT OF SAINIK WELFARE AND RESETTLEMENT

Office of the Deputy Director, Department of Sainik Welfare & Resettlement (Karnataka)

No.__________________________

Date:__________________

## CERTIFICATE

This is to certify that Sri / Smt / Kum ____________________________________ is an applicant for __________________________ is the Spouse / Son / Daughter of No________ Rank _________ Name ________________________________________ of Army / Navy / Air Force, who is an Ex-Serviceman according to the definition laid down by the Minister of Defence, Government of India. He served from __________________ to ___________________

The Ex-Serviceman had declared his home town in Karnataka at the time of entry into service as per records & hence eligible to avail reserved seats under Ex-Serviceman quota. His permanent home address at the time of entry into service was as under:

________________________________________

________________________________________

Signature of the Deputy Director

Department of Sainik Welfare & Resettlement

...................................................... District

OR

## CERTIFICATE

This is certify that Sri / Smt / Kum ______________________________ is an applicant for ______________________ is the Spouse / Son / Daughter of No________ Rank _________ Name __________________________________ who Died / Disabled while in service according to the certificate issued by Defence Authority.

He Died / Disabled on ________________

Home address of the individual at the time of joining Defence Service as per the records is:

__________________________________

__________________________________

Place:

Date:

Signature of the Deputy Director

Department of Sainik Welfare & Resettlement

....................................................... District

**ಪ್ರಸ್ತುತವಾಗಿ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ / ಅನುಮತಿ ಪತ್ರದ ನಮೂನೆ**

ಸಂಖ್ಯೆ.________________________________ ದಿನಾಂಕ:______________

**<u>ನಿರಾಕ್ಷೇಪಣಾ / ಅನುಮತಿ ಪತ್ರ</u>**

ಶ್ರೀ / ಶ್ರೀಮತಿ.............................................................. ತಂದೆ ............................................... ಇವರು ದಿನಾಂಕ .............................................. ರಿಂದ ................................................................................ ಸಂಸ್ಥೆಯಲ್ಲಿ .......................................................................................... ಹುದ್ದೆಯಲ್ಲಿ ಖಾಯಂ / ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ಸಂಖ್ಯೆ. ಬಮೂಲ್/ ಆಡಳಿತ/ ನೇರ ನೇಮಕಾತಿ/ 70/ 2017-18 ದಿನಾಂಕ: 07-07-2017 ಅಧಿಸೂಚನೆಯಂತೆ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ಬೆಂಗಳೂರು ಇವರು ಆಹ್ವಾನಿಸಿರುವ .......................................... ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ / ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

**ಪ್ರಸ್ತುತ ನೇಮಕಾತಿ ಪ್ರಾಧಿಕಾರಿಗಳ ಪದನಾಮ**

**ಮೊಹರು**

# ನಡತೆ ಪ್ರಮಾಣ ಪತ್ರ

ಶ್ರೀ ______________________________ ಇವರ ಮಗನಾದ/ಮಗಳಾದ ಶ್ರೀ/ಶ್ರೀಮತಿ ______________________________ ಇವರನ್ನು ನಾನು ಕಳೆದ ______________ ವರ್ಷ ______________ ತಿಂಗಳುಗಳಿಂದ ಬಲ್ಲೆ ಮತ್ತು ನನಗೆ ತಿಳಿದ ಮಟ್ಟಿಗೆ ಹಾಗೂ ನಂಬುವಷ್ಟರ ಮಟ್ಟಿಗೆ ಒಳ್ಳೆಯ ನಡತೆಯುಳ್ಳವರಾಗಿದ್ದಾರೆ ಮತ್ತು ಸರ್ಕಾರಿ ಉದ್ಯೋಗಕ್ಕೆ ಸೇರಲು ಅನರ್ಹಗೊಳಿಸುವಂಥ ಯಾವ ಪೂರ್ವೋತ್ತರಗಳನ್ನು ಅವರು ಹೊಂದಿಲ್ಲವೆಂದು ಪ್ರಮಾಣೀಕರಿಸುತ್ತೇನೆ.

ಶ್ರೀ/ಶ್ರೀಮತಿ ______________________________ ಇವರು ನನಗೆ ಸಂಬಂಧಿಕರಲ್ಲ.

ಸ್ಥಳ :

ದಿನಾಂಕ:

ರುಜು :

ಉದ್ಯೋಗನಾಮ :